ಈ) ದಾವಣಗೆರೆ ವಿಧಾನಸಭಾ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಯಿಂದ ರಾಜ್ಯ ಹೆದ್ದಾರಿಗಾಗಿ 14.04 ಲಕ್ಷ ಹಾಗೂ ಜಿಲ್ಲಾ ಮುಖ್ಯ ರಸ್ತೆಗಾಗಿ 60.30 ಲಕ್ಷದಂತೆ ವಾರ್ಷಿಕ ದುರಸ್ತಿ ಮತ್ತು ನಿರ್ವಹಣೆ ಅನುದಾನ ಬಿಡುಗಡೆ ಮಾಡುತ್ತಿದ್ದು ಈಗಾಗಲೇ ರಸ್ತೆ ಅಭಿವೃದ್ದಿ ಕಾರ್ಯವನ್ನು ಕೈಗೊಳ್ಳಲಾಗಿದ್ದು, ಅನುದಾನದ ಲಭ್ಯತೆಯ ಮೇರೆಗೆ ಪೂರ್ಣಗೊಳಿಸಲಾಗುವುದು.

ಬೆಂಗಳೂರು-ಹೊನ್ನಾವರ ರಸ್ತೆ ಅಭಿವೃದ್ದಿ.

2898;(3925)

ಶ್ರೀ ಬಿ.ನಂಜಾಮರಿ (ತಿಪಟೂರು): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಹೊನ್ನಾವರ ರಸ್ತೆ ಮಳೆಯ ಅತಿವೃಷ್ಟಿಯಿಂದ ವಾಹನಗಳ ಸಂಚಾರಕ್ಕೆ ಅನಾನುಕೂಲವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ರಸ್ತೆಯನ್ನು ದುರಸ್ತಿ ಮಾಡುವ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):

ಅ) ಹಲವೆಡೆ ತೊಂದರೆ ಆಗಿರುವುದು ಗಮನಕ್ಕೆ ಬಂದಿದೆ.

ಆ) ಸದರಿ ರಸ್ತೆಯ ವಾರ್ಷಿಕ ಸಾಮಾನ್ಯ ದುರಸ್ತಿ ಅನುದಾನದಲ್ಲಿ ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ ಹಾನಿಗೊಳಗಾದ ರಸ್ತೆಯನ್ನು ತುರ್ತು ದುರಸ್ತಿ ಮಾಡಲಾಗುತ್ತಿದೆ.

ತಿಪಟೂರು ತಾಲ್ಲೂಕಿನ ಗ್ರಾಮಾಂತರ ಪ್ರದೇಶಗಳ ರಸ್ತೆಗಳ ದುರಸ್ತಿ.

2899:(3925)

ಶ್ರೀ ಬಿ.ನಂಜಾಮರಿ (ತಿಪಟೂರು) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ತಿಪಟೂರು ತಾಲ್ಲೂಕಿನ ಮಳೆಯ ಅತೀ ವೃಷ್ಟಿಯಿಂದ ಗ್ರಾಮಾಂತರ

ಪ್ರದೇಶದಲ್ಲಿರುವ ಎಲ್ಲಾ ರಸ್ತೆಗಳು ಹಾಳಾಗಿದ್ದು ಸಂಚಾರಕ್ಕೆ ತುಂಬಾ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ. ಹಾಗಿದ್ದಲ್ಲಿ ಅಲ್ಲಿನ ರಸ್ತೆಗಳನ್ನು ದುರಸ್ತಿ ಗೊಳಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):

ಅ. ಲೋಕೋಪಯೋಗಿ ಇಲಾಖೆಗೆ ಬರುವ ರಸ್ತೆಗಳು ಹಲವಡೆ ಮಳೆಗೆ ಹಾಳಾಗಿರುವುದು ಗಮನಕ್ಕೆ ಬಂದಿದೆ.

ಆ. ವಾಹನಗಳ ಸಂಚಾರಕ್ಕೆ ಅಡಚಣೆಯಾಗದಂತೆ ರಸ್ತೆಗಳ ದುರಸ್ತಿಗೆ ತುರ್ತು ಕ್ರಮ ತೆಗೆದುಕೊಳ್ಳಲಾಗಿದೆ.

ಇ.ಎಸ್.ಐ.ಯೋಜನೆಯಡಿಯಲ್ಲಿ ಬರುವ ಕಾರ್ಮಿಕರಿಗೆ ವೈದ್ಯಕೀಯ ಸೌಲಭ್ಯ.

2900:(3919)

ಶ್ರೀ ಡಿ.ಆರ್.ಪಾಟೀಲ (ಗದಗ್) ಮಾನ್ಯ ಕಾರ್ಮಿಕ ರಾಜ್ಯ ಮಂತ್ರಿಗಳು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಐ.ಎಸ್.ಐ. ಯೋಜನೆಯಡಿಯಲ್ಲಿ ಬರುವ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

ಆ) ಈ ಕಾರ್ಮಿಕರ ವೈದ್ಯಕೀಯ ಸೌಲಭ್ಯಕ್ಕಾಗಿ ವೆಚ್ಚವಾಗುವ ಒಟ್ಟು ಮೊತ್ತ ಎಷ್ಟು;

ಇ) ಈ ಕಾರ್ಮಿಕರ ಸೌಲಭ್ಯಕ್ಕಾಗಿ ಇರುವ ಆಸ್ಪತ್ರೆಗಳೆಷ್ಟು; ಮೀಸಲಾಗಿರುವ ಹಾಸಿಗೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

ಈ) ಈ ಕಾರ್ಮಿಕರ ವಿಮೆಗಾಗಿ ಮಾಡಲಾಗುವ ಒಟ್ಟು ಮೊತ್ತ ಎಷ್ಟು;

ಉ) ಈ ಕಾರ್ಮಿಕರ ಇತರೇ ಸೌಲಭ್ಯಗಳಿಗಾಗಿ ಮಾಡಲಾಗುವ ಒಟ್ಟು ವೆಚ್ಚ ಎಷ್ಟು?

ಶ್ರೀ ಬಿ.ಸತ್ಯನಾರಾಯಣ (ಕಾರ್ಮಿಕ ರಾಜ್ಯ ಸಚಿವರು):

ಅ)7,34,600 ವಿಮಾದಾರರು. (ಜಿಲ್ಲಾವಾರು ವಿವರಗಳನ್ನು ಅನುಬಂಧ-1ರಲ್ಲಿ